## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತಿ.ನರಸೀಪುರ

### ಸಿ.ಸಿ.616/2023

| | | | | |
|---|---|---|---|---|
| 01 | ಹೆಸರು | ತಿಮ್ಮೇಗೌಡ | ಸಿ ಡಬ್ಲೂ | 2 |
| 02 | ತಂದೆಯ ಹೆಸರು | ಬೆಟ್ಟೇಗೌಡ | ಪಿಡಬ್ಲೂ | 1 |
| 03 | ವಯಸ್ಸು | 52 | ಪ್ರಮಾಣೀಕರಿಸಲಾದ ದಿನಾಂಕಃ | |
| 04 | ಉದ್ಯೋಗ | ವ್ಯವಸಾಯ | 11.02.2026 | |
| 05 | ಊರು | ಕುಳ್ಳನಕೊಪ್ಪಲು ಗ್ರಾಮ | | |

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:**

ಚಾ ಸಾ 1 ರವರು ಈಗ ಮೃತಪಟ್ಟಿರುತ್ತಾರೆ. ನನಗೆ ಚಾ ಸಾ 3 ರವರ ಪರಿಚಯ ಇರುತ್ತದೆ. ನನಗೆ ಚಾ ಸಾ 4 ಮತ್ತು 5 ರವರ ಪರಿಚಯ ಇರುವುದಿಲ್ಲ. ನನಗೆ ಆರೋಪಿಗಳ ಪರಿಚಯ ಇರುತ್ತದೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಯಾವುದೇ ಗಲಾಟೆಯನ್ನು ಕಣ್ಣಾರೆ ನೋಡಿರುವುದಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ಕೊಟ್ಟಿರುವುದಿಲ್ಲ. ನ್ಯಾಯಾಲಯದ ಮುಂದೆ ಇರುವ ದೊಣ್ಣೆಯನ್ನು ನಾನು ಈ ಹಿಂದೆ ನೋಡಿರುವುದಿಲ್ಲ.

**(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಮಾನ್ಯ ಎ ಪಿ ಪಿ ರವರು ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:**

ದಿಃ07.02.2023 ರಂದು ಸಂಜೆ 7.45 ಗಂಟೆ ಸಮಯದಲ್ಲಿ ನಾನು ಮತ್ತು ಚಾ ಸಾ 3 ರವರು ಹಾಲಿನ ಡೈರಿ ಬಳಿಯಿದ್ದಾಗ ಆರೋಪಿಗಳು ಏಕಾಏಕಿ ಬಂದು ಚಾ ಸಾ 1 ರವರ ಕುತ್ತಿಗೆ ಪಟ್ಟಿಯನ್ನು ಹಿಡಿದು ಅವಾಚ್ಯ ಶಬ್ದಗಳಿಂದ ಬೈದು 1 ನೆ ಆರೋಪಿ ಕೈಯಿಂದ ಚಾ ಸಾ 1 ರವರ ಎದೆಗೆ, ಹಣೆಯ ಭಾಗಕ್ಕೆ ಮತ್ತು ಎಡಭಾಗದ ಕಣ್ಣಿನ ಬಳಿ ಹೊಡೆದಿರುತ್ತಾನೆ ಎಂದರೆ ನನಗೆ ಗೊತ್ತಿಲ್ಲ.

ನಂತರ 2ನೇ ಆರೋಪಿ ಚಾ ಸಾ 1ರವರನ್ನು ಕೆಳಕ್ಕೆ ಬೀಳಿಸಿ ಕಾಲಿನಿಂದ ಮೈಕೈಗೆ ತುಳಿದು , ಹೊಟ್ಟೆಯ ಭಾಗಕ್ಕೆ ಒದ್ದು ಹಲ್ಲೆ ಮಾಡಿರುತ್ತಾನೆ ಎಂದರೆ ನನಗೆ ಗೊತ್ತಿಲ್ಲ. 1ನೇ ಆರೋಪಿ ಅಲ್ಲೇ ಇದ್ದ ದೊಣ್ಣೆಯಿಂದ ಚಾ ಸಾ 1ರವರ ಬಲ ತೊಡೆಗೆ ಹೊಡೆದಿರುತ್ತಾನೆ ಎಂದರೆ ನನಗೆ ಗೊತ್ತಿಲ್ಲ. ಆಗ ನಾನು ಮತ್ತು ಚಾ ಸಾ 3ರವರು ಜಗಳ ಬಿಡಿಸಿರುತ್ತೇವೆ ಎಂದರೆ ಸರಿಯಲ್ಲ. ಆ ಸಂದರ್ಭದಲ್ಲಿ ಆರೋಪಿಗಳು ಚಾ ಸಾ 1ರವರಿಗೆ ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಚಾ ಸಾ 1ರವರು ಬನ್ನೂರಿನ ಬನ್ನೂರಿನ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡು ಪೊಲೀಸ್ ಠಾಣೆಗೆ ಹೋಗಿ ಆರೋಪಿಗಳ ವಿರುದ್ಧ ದೂರು ಕೊಟ್ಟಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ನಾನು ದಿಃ08.03.2023 ರಂದು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ನ್ಯಾಯಾಲಯದ ಮುಂದೆ ಇರುವ ದೊಣ್ಣೆಯಿಂದಲೇ ಒಂದನೇ ಆರೋಪಿ ಚಾ ಸಾ 1ರವರಿಗೆ ಹಲ್ಲೆ ಮಾಡಿದ್ದರು ಎಂದರೆ ನನಗೆ ಗೊತ್ತಿಲ್ಲ. ಸಾಕ್ಷಿಯು ನಿರಾಕರಿಸಿದ ಹೇಳಿಕೆ ಭಾಗವನ್ನು ನಿ ಪಿ 1 ಎಂದು ಗುರುತಿಸಲಾಯಿತು.

ನಾನು ನಿ ಪಿ 1ರಂತೆ ಪೊಲೀಸರಿಗೆ ಹೇಳಿಕೆ ನೀಡಿದ್ದರೂ ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇರುವುದಿಲ್ಲ ಎಂದು ನುಡಿದಿರುತ್ತಾರೆ.**

ಮರುವಿಚಾರಣೆಃಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿಯಾಗಿದೆ.

(ಸಚಿನ್ ಹೆಚ್ . ಆರ್.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ತಿ.ನರಸೀಪುರ.